ಅ) ರಾಜ್ಯದಲ್ಲಿ ಇಂಗ್ಲೀಷ್ ಮಾಧ್ಯಮ ಶಾಲೆಗಳನ್ನು ಪ್ರಾರಂಭಿಸಲು ಅನುಮತಿ ಕೋರಿ ಎಷ್ಟು ಅರ್ಜಿಗಳು ಸರ್ಕಾರಕ್ಕೆ ಬಂದಿವೆ?

ಇ) ಇಂಗ್ಲೀಷ್ ಮಾಧ್ಯಮದ ಶಾಲೆಗಳ ಕುರಿತು ಸರ್ಕಾರದ ನಿರ್ದಿಷ್ಟ ನಿಲುವೇನುಯ

ಶ್ರೀ ಎಂ. ವೀರಪ್ಪ ಮೋಯಿಲಿ (ಶಿಕ್ಷಣ ಸಚಿವರು):

ಅ) ರಾಜ್ಯದಲ್ಲಿ ಪ್ರಾಥಮಿಕ ಶಾಲೆಯ ಮಾಧ್ಯಮದ ಬಗ್ಗೆ ಪರಿಶೀಲನೆ ನಡೆಸಿ ವರದಿಯನ್ನು ನೀಡುವ ಸಲುವಾಗಿ ತಜ್ಞರ ಸಮಿತಿಯನ್ನು ಸರ್ಕಾರದ ಆದೇಶ ಸಂಖ್ಯೆ: ಇಡಿ 177 ಪಿ.ಟಿ.ಪಿ. 90, ದಿನಾಂಕ 11-1-91ರಲ್ಲಿ ನೇಮಿಸಲಾಗಿದೆ. ವಿವಿಧ ಶಾಸಕರು ಸಲ್ಲಿಸಿರುವ ಮನವಿಯನ್ನು ಸಹ ಈ ಸಮಿತಿಯು ಪರಿಶೀಲಿಸುತ್ತದೆ.

ಆ) -324-

ಇ) ತಜ್ಞರ ಸಮಿತಿಯು ನೀಡುವ ವರದಿಯನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಬೇಕಾಗುತ್ತದೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಖಾಲಿ ಇರತಕ್ಕ ಸರಕಾರಿ ಮತ್ತು ಅನುದಾನಿತ ಪ್ರೌಢಶಾಲೆಗಳ ಹುದ್ದೆಗಳನ್ನು ಭರ್ತಿಮಾಡುವ ಬಗ್ಗೆ

723 - ಶ್ರೀ ಎ. ರುಕ್ಮಯ್ಯ ಪೂಜಾರಿ (ವಿಟ್ಲ) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಸರಕಾರಿ ಮತ್ತು ಅನುದಾನ ಪಡೆಯುವ ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಅಧ್ಯಾಪಕರ ಹುದ್ದೆಗಳು ಬಹಳ ವರ್ಷಗಳಿಂದ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಇದರಿಂದಾಗಿ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ತೊಂದರೆಯಾಗುವುದಿಲ್ಲವೆ?

ಇ) ಆವುಗಳನ್ನು ಭರ್ತಿಮಾಡಲು ಸರಕಾರ ಕ್ರಮ ತೆಗೆದುಕೊಳ್ಳುವುದೇ?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಸಚಿವರು)

ಅ) ಹೌದು

ಆ) ಹೌದು

ಇ) ಪರಿಶೀಲಿಸಲಾಗುವುದು.

ರಾಜ್ಯದಲ್ಲಿ ನಡೆಯುತ್ತಿರುವ ಸರಕಾರಿ ಮತ್ತು ಖಾಸಗೀ ಶಿಕ್ಷಣ ಸಂಸ್ಥೆಗಳ ಬಗ್ಗೆ

710 - ಶ್ರೀ ಕೆ. ಹರ್ಷಕುಮಾರ್ ಗೌಡ (ಚಾಮರಾಜ) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪ್ರಸಕ್ತ ನಡೆಸಲ್ಪಡುತ್ತಿರುವ ಸರಕಾರಿ ಮತ್ತು ಖಾಸಗೀ ಶಾಲೆಗಳೆಷ್ಟು?

ಆ) ಆವುಗಳಲ್ಲಿ ಸರಕಾರಿ ಪ್ರೈಮರಿ, ಪ್ರೌಢಶಾಲೆಗಳು, ಪದವಿ ಪೂರ್ವ ಶಾಲೆಗಳೆಷ್ಟು?

ಇ) ಸರಕಾರಿ ಶಾಲೆಗಳ ಗುಣಮಟ್ಟ ಸುಧಾರಿಸಲು ಸರಕಾರ ತೆಗೆದುಕೊಂಡಿರುವ ಕ್ರಮಗಳೇನು?

ಈ) ಹೊಸದಾಗಿ ಸರ್ಕಾರ ಮಂಜೂರು ಮಾಡಲು ಉದ್ದೇಶಿಸಿರುವ ಖಾಸಗಿ ಶಾಲೆಗಳ ಸಂಖ್ಯೆ ಎಷ್ಟು?

ಶ್ರೀ. ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರ ಸಚಿವರು):

ಅ) 46,427.

ಆ) ಸರಕಾರಿ ಪ್ರಾಥಮಿಕ ಶಾಲೆ 35850

ಸರಕಾರಿ ಪ್ರಾಢ ಶಾಲೆ 1457

ಸರಕಾರಿ ಪದವಿ ಪೂರ್ವಕಾಲೇಜು 393

ಇ) ಎಲ್ಲಾ ಖಾಲಿ ಶಿಕ್ಷಕರ ಹುದ್ದೆ ತುಂಬಲಾಗುತ್ತಿದೆ. ಎಲ್ಲಾ ಶಾಲೆಗಳಿಗೆ ಹಂತಹಂತವಾಗಿ ವಿಜ್ಞಾನ ಉಪಕರಣಗಳನ್ನು ಪೂರೈಸಲಾಗುತ್ತಿದೆ. ಶಿಕ್ಷಕರ ತರಬೇತಿಗೆ ವಿಶೇಷ ವ್ಯವಸ್ಥೆ ಮಾಡಲಾಗುತ್ತಿದೆ. ಬಹಳ ಕಾಲದಿಂದ ಖಾಲಿ ಇದ್ದ ಹುದ್ದೆ ಮೇಲ್ವಿಚಾರಕ ಅಧಿಕಾರಿಗಳ ಹುದ್ದೆಗಳನ್ನು ಈಗ ತುಂಬಲಾಗುತ್ತಿದೆ. ಪರಿಣಾಮಕಾರಿ ಮೇಲ್ವಿಚಾರಣೆ ಹಾಗೂ ಮಾರ್ಗದರ್ಶನ ಸಾಧ್ಯವಾಗಲಿದೆ.

ಈ) ಸರ್ಕಾರ ಪರಿಶೀಲಿಸುತ್ತಿದೆ.

ನಂಜನಗೂಡು ಟೌನ್ ದಳವಾಯಿ ಹಿರಿಯ ಪ್ರಾಥಮಿಕ ಶಾಲೆ ಕಟ್ಟಡ ನಿರ್ಮಾಣದ ಬಗ್ಗೆ

703 - ಶ್ರೀ ಎಂ. ಮಹದೇವ್ (ನಂಜನಗೂಡು) - ಮಾನ್ಯ ಶಿಕ್ಷಣ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಂಜನಗೂಡು ಟೌನ್ ದಳವಾಯಿ ಹಿರಿಯ ಪ್ರಾಥಮಿಕ ಶಾಲೆ ಕಟ್ಟಡವನ್ನು 6 ವರ್ಷಗಳ ಹಿಂದೆನೆ ಕೊಡವಿದ್ದರಿಂದಾಗಿ ಸುಮಾರು 2,000 ಶಾಲಾ ಮಕ್ಕಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಕಟ್ಟಡವನ್ನು ಕೆಡವಿದಾಗ ಸಿಕ್ಕಿದ ಸಾಮಾನಿನ ಮರಮುಟ್ಟುಗಳ ವಿವರ ಸಮೇತ ಅಂದಾಜು ಬೆಲೆ ಎಷ್ಟು?

ಇ) ಈ ಬಗ್ಗೆ ಲಕ್ಷಾಂತರ ರೂಪಾಯಿ ಬೆಲೆ ಬಾಳುವ ಮರದ ದುರುಪಯೋಗದದ ಅಪಾದನೆ ಇದೆಯೇ ಮತ್ತು ಈ ಬಗ್ಗೆ ಸಮಿತಿ ರಚಿಸಿ ತನಿಖೆ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ?

ಈ) ಈ ಕಟ್ಟಡಕ್ಕೆ ಮಂಜೂರು ಆಗಿರುವ ಹಣವೆಷ್ಟು?

ಉ) ಈ ಕಟ್ಟಡವನ್ನು ಪ್ರಾರಂಭಿಸಲು ಸರ್ಕಾರವು ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಊ) ಈ ಕಟ್ಟಡ ಕೆಲಸವು ಜಿಲ್ಲಾ ಪರಿಷತ್ತಿನಿಂದ ಹೊರತುಪಡಿಸಿ ಸರ್ಕಾರವೇ ಲೋಕೋಪಯೋಗಿ ಇಲಾಖೆ ಅಥವಾ ಕಟ್ಟಡ ನಿರ್ಮಾಣ ನಿಗಮದ ಮುಖೇನ ಆದಷ್ಟು ಬೇಗನೆ ಮಾಡಿಸುವುದೇ?

ಶ್ರೀ ಎಂ. ವೀರಪ್ಪ ಮೊಯಿಲಿ ಶಿಕ್ಷಣ ಮತ್ತು ಸಂಸದೀಯ ವ್ಯವಹಾರ ಸಚಿವರು):

ಅ) ಸರ್ಕಾರದ ಗಮನಕ್ಕೆ ಬಂದಿದೆ.

ಆ) ಕಟ್ಟಡ ಕೆಡವಿದಾಗ ಸಿಕ್ಕ ಮರಮಟ್ಟು ಸಾಮಾನುಗಳು ಬಹಳ ಹಳೆಯದಾಗಿ ರುವುದರಿಂದ ಬೆಲೆ ಕಟ್ಟಲು ಸಾಧ್ಯವಿಲ್ಲ.